ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016–17 ದಿನಾಂಕ: 16–06–2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಕರ್ನಾಟಕ ಆಯುರ್ವೇದ ಮತ್ತು ಯುನಾನಿ ವೈದ್ಯ ಮಂಡಳಿಯ ನೂತನ ಕಟ್ಟಡ ಉದ್ಘಾಟನಾ ಸಮಾರಂಭ:<br>ಉದ್ಘಾಟನೆ:<br>ಯು. ಟಿ. ಖಾದರ್,<br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು | 17–06–2016<br>ಶುಕ್ರವಾರ<br>ಬೆಳಿಗ್ಗೆ<br>10–00 ಗಂಟೆಗೆ | ಹೋಟೆಲ್ ಸಿಟಾಡೆಲ್,<br>ಆನಂದರಾವ್ ವೃತ್ತ<br>ಬೆಂಗಳೂರು |
| 2 | ವಿಧಾನ ಪರಿಷತ್ತಿಗೆ ಚುನಾಯಿತರಾಗಿರುವ ಕೆ.ವಿ. ನಾರಾಯಣಸ್ವಾಮಿ ಅವರ ಪ್ರಮಾಣ ವಚನ ಸ್ವೀಕಾರ.<br>ಪ್ರಮಾಣ ವಚನ ಬೋಧನೆ:<br>ಡಿ,ಎಸ್, ಶಂಕರಮೂರ್ತಿ,<br>ಸಭಾಪತಿಗಳು,<br>ವಿಧಾನ ಪರಿಷತ್,<br>ಕರ್ನಾಟಕ | 17–06–2016<br>ಶುಕ್ರವಾರ<br>ಮಧ್ಯಾಹ್ನ<br>12–30 ಗಂಟೆಗೆ | ಕೊಠಡಿ ಸಂಖ್ಯೆ 117,<br>ಸಭಾಪತಿಯವರ ಅಧಿಕೃತ ಕೊಠಡಿ, ಮೊದಲ ಮಹಡಿ,<br>ವಿಧಾನಸೌಧ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

## ಬೇಕರಿ ತಂತ್ರಜ್ಞಾನ ತರಬೇತಿ

ಬೆಂಗಳೂರು, ಜೂನ್ 16 (ಕರ್ನಾಟಕ ವಾರ್ತೆ)

ಹದಿನಾಲ್ಕು ವಾರದ ಬೇಕರಿ ಟೆಕ್ನಾಲಜಿ ತರಬೇತಿಗಾಗಿ ಅರ್ಜಿ ಸ್ವೀಕರಿಸಲಾಗುವುದು. ಅಭ್ಯರ್ಥಿಯು ಕನಿಷ್ಟ ಎಸ್.ಎಸ್.ಎಲ್.ಸಿ. (ಹತ್ತನೇ ತರಗತಿ) ಪಾಸಾಗಿರಬೇಕು. ನಿಗದಿತ ಅರ್ಜಿ ಫಾರಂಗಳನ್ನು ರೂಪಾಯಿ 10–00 (ಹತ್ತು) ಸಂದಾಯಿಸಿ, ಬೇಕರಿ ತರಬೇತಿ ಕೇಂದ್ರ, ಕೃಷಿ ವಿಶ್ವ ವಿದ್ಯಾನಿಲಯ, ಹೆಬ್ಬಾಳ,

ಬೆಂಗಳೂರು – 560 024, ಇಲ್ಲಿಂದ ಪಡೆದುಕೊಳ್ಳಬಹುದು. ಅರ್ಜಿಯನ್ನು ಪಡೆಯಲು ಹಾಗೂ ಭರ್ತಿಮಾಡಿದ ಅರ್ಜಿಯನ್ನು ಹಿಂದಿರುಗಿಸಲು ಜುಲೈ 6 ರಂದು ಮಧ್ಯಾಹ್ನ 12–00 ಗಂಟೆಯೊಳಗೆ ಸಂಯೋಜಕರು, ಬೇಕರಿ ತರಬೇತಿ ಕೇಂದ್ರ, ಕೃಷಿ ವಿಶ್ವ ವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು – 560 024 ಈ ವಿಳಾಸಕ್ಕೆ ತಲುಪಿಸಬೇಕು ಹೆಚ್ಚಿನ ವಿವರಗಳಿಗೆ ಸಂಯೋಜಕರು, ಬೇಕರಿ ತರಬೇತಿ ಕೇಂದ್ರ, ಕೃಷಿ ವಿಶ್ವ ವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು ಇವರನ್ನು ಖುದ್ದಾಗಿ ಅಥವಾ ದೂರವಾಣಿ 080 – 23513370 ಮೂಲಕ ಸಂಪರ್ಕಿಸಬಹುದು.

ಬಾಬು::ಜಿಪಿಆರ್

# Bakery Training

**Bengaluru, June 16th (Karnataka Information)**

**Bakery Training Unit, University of Agricultural Sciences, Hebbal, Bengaluru – 560 024 has invited application for 14 weeks certificate course in Bakery Technology. Minimum qualification required is pass in SSLC/10th Standard. The applications may be obtained from Bakery Training Unit by paying a fee of Rs.10/- and the completed application may be sent to Co-coordinator, Bakery Training Unit, UAS, Hebbal, Bengalure – 560 024.**

**The last date to issue and receive application is on or before July 2nd 12.00 noon, Interested candidates can contact Co-coordinator, Bakery Training Unit, UAS, Hebbal, Bengaluru - 560 024, personally or through phone 080-23513370.**

**babu:gpr.**

# ಆನ್‌ಲೈನ್ ಅರ್ಜಿ ಆಹ್ವಾನ

ಬೆಂಗಳೂರು, ಜೂನ್ 16 (ಕರ್ನಾಟಕ ವಾರ್ತೆ)

2016–17 ನೇ ಸಾಲಿನಲ್ಲಿ ಡಿ.ಇಡಿ/ಡಿ.ಪಿ.ಇಡಿ ಕೋರ್ಸುಗಳ ವ್ಯಾಸಂಗಕ್ಕಾಗಿ ರಾಜ್ಯದ ಸರ್ಕಾರಿ ಮತ್ತು ಮಾನ್ಯತೆ ಪಡೆದ ಅನುದಾನಿತ ಮತ್ತು ಅನುದಾನ ರಹಿತ ಶಿಕ್ಷಕ ತರಬೇತಿ ಸಂಸ್ಥೆಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳ ದಾಖಲಾತಿಗಾಗಿ ಆನ್‌ಲೈನ್ (Online) ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಡಿ.ಪಿ.ಇಡಿ. ಕೋರ್ಸಿಗೆ : ಡಿ.ಪಿ.ಇಡಿ ಕೋರ್ಸಿಗೆ ಸೇರುವ ಎಲ್ಲಾ ಅಭ್ಯರ್ಥಿಗಳು ದ್ವಿತೀಯ ಪಿ.ಯು.ಸಿ./12ನೇ ತರಗತಿಯ ಪರೀಕ್ಷೆಯಲ್ಲಿ ಕನಿಷ್ಟ 45% ಅಂಕಗಳನ್ನು ಹಾಗೂ ಶಿಕ್ಷಣ ಇಲಾಖೆ ಅಥವಾ ವಿಶ್ವವಿದ್ಯಾಲಯ ಅಥವಾ ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ ಆಯೋಜಿಸಿರುವ ರಾಜ್ಯ ಅಥವಾ ರಾಷ್ಟ್ರಮಟ್ಟದ ಕ್ರೀಡೆಯಲ್ಲಿ ಭಾಗವಹಿಸಿ ಪ್ರಮಾಣ ಪತ್ರ ಹೊಂದಿರುವ ಅಭ್ಯರ್ಥಿಗಳು ಕನಿಷ್ಟ 40% ಅಂಕಗಳನ್ನು ಪಡೆದಿರಬೇಕು. ಆನ್‌ಲೈನ್ ಮೂಲಕ ಅರ್ಜಿಗಳನ್ನು 30–06–2016 ರವರೆಗೆ ಸಲ್ಲಿಸಬಹುದಾಗಿದ್ದು, ಅರ್ಜಿಯನ್ನು ಆನ್‌ಲೈನ್ ಮೂಲಕ ಸಲ್ಲಿಸುವ ವಿಧಾನ, ಅರ್ಹತೆ ಮತ್ತು ಮೀಸಲಾತಿ ವಿವರಗಳು ಹಾಗೂ

ಇತರೆ ಸೂಚನೆಗಳನ್ನು ವೆಬ್‌ಸೈಟ್ www.schooleducation.kar.nic.in ನಲ್ಲಿ ಪ್ರಕಟಿಸಲಾಗಿದೆ. ವೆಬ್‌ಸೈಟ್‌ನಲ್ಲಿನ ಮಾಹಿತಿಗಳನ್ನು ಕಡ್ಡಾಯವಾಗಿ ಓದಿಕೊಂಡು ಅರ್ಜಿಗಳನ್ನು ಕ್ರಮವಾಗಿ ಭರ್ತಿ ಮಾಡುವುದು. ಹೆಚ್ಚಿನ ಮಾಹಿತಿ ಅಗತ್ಯವಿದ್ದಲ್ಲಿ ಕೇಂದ್ರೀಕೃತ ದಾಖಲಾತಿ ಘಟಕದ ದೂರವಾಣಿ ಸಂಖ್ಯೆ 080-22483140 ಮತ್ತು 080-22483145 ಸಂಪರ್ಕಿಸುವುದು ಅಥವಾ ಜಿಲ್ಲಾ ಶಿಕ್ಷಣ ತರಬೇತಿ ಸಂಸ್ಥೆಗಳ ಪ್ರಾಂಶುಪಾಲರಿಂದ ಮಾಹಿತಿ ಪಡೆದುಕೊಳ್ಳಬಹುದಾಗಿದೆ.

ಬಾಬು::ಜಿಪಿಆರ್

# ಈ ವಾರದ ಬೆಳ್ಳಿ ಸಿನಿಮಾ "ಅಷ್ಟಾವಕ್ರ"

ಬೆಂಗಳೂರು, ಜೂನ್ 16 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಪ್ರತಿ ಶನಿವಾರ ನಡೆಸುವ ಬೆಳ್ಳಿಸಿನಿಮಾ ಬೆಳ್ಳಿಮಾತು ಕಾರ್ಯಕ್ರಮದಲ್ಲಿ ಜೂನ್ 18 ರ ಶನಿವಾರ ಸಂಜೆ 4-00 ಗಂಟೆಗೆ ನಗರದ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಬೆಳ್ಳಿ ಸಿನಿಮಾ " ಅಷ್ಟಾವಕ್ರ " ಚಲನಚಿತ್ರವನ್ನು ಪ್ರದರ್ಶಿಸಲಾಗುವುದು ಎಂದು ಅಕಾಡೆಮಿ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ತಿಳಿಸಿದ್ದಾರೆ.

ಅಂದು " ಅಷ್ಟಾವಕ್ರ " ಚಲನಚಿತ್ರ ಪ್ರದರ್ಶನದ ನಂತರ ಚಿತ್ರದ ನಿರ್ದೇಶಕ ರಾಜಾರವಿಶಂಕರ್ ಅವರ ಬೆಳ್ಳಿಮಾತು ಸಂವಾದ ಏರ್ಪಡಿಸಲಾಗಿದೆ. ಮುಖ್ಯ ಅತಿಥಿಗಳಾಗಿ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಡಾ. ಚಂದ್ರಶೇಖರ ಕಂಬಾರ, ಚಿತ್ರ ನಿರ್ಮಾಪಕ ಡಾ. ಎಂ. ಕೆ. ಸುಂದರ ರಾಜನ್, ಹಿರಿಯ ಚಲನಚಿತ್ರ ಕಲಾವಿದೆ ಶ್ರೀಮತಿ ಪ್ರಮೀಳಾ ಜೋಷಾಯ್ ಹಾಗೂ ಚಲನಚಿತ್ರ ನಟಿ ಕುಮಾರಿ ಮೇಘನಾ ರಾಜ್ ಪಾಲ್ಗೊಳಲಿದ್ದು, ಸಮಾರಂಭದ ಅಧ್ಯಕ್ಷತೆಯನ್ನು ಅಕಾಡೆಮಿ ಅಧ್ಯಕ್ಷ ಎಸ್.ವಿ. ರಾಜೇಂದ್ರಸಿಂಗ್ ಬಾಬು ವಹಿಸುವರು ಎಂದು ಅವರು ತಿಳಿಸಿದ್ದಾರೆ.

ಬಾಬು::ಜಿಪಿಆರ್

# ಸಾಹಸ ಕ್ರೀಡಾ ತರಬೇತಿ

ಬೆಂಗಳೂರು, ಜೂನ್ 16 (ಕರ್ನಾಟಕ ವಾರ್ತೆ)

ಜನರಲ್ ತಿಮ್ಮಯ್ಯ ರಾಷ್ಟ್ರೀಯ ಅಕಾಡೆಮಿ ವತಿಯಿಂದ 2016-17 ನೇ ಸಾಲಿಗೆ ಜಲಸಾಹಸ ಹಾಗೂ ಭೂಸಾಹಸ ತರಬೇತಿ ಶಿಬಿರಗಳನ್ನು ಜುಲೈ 2016ರಿಂದ ಸೆಪ್ಟೆಂಬರ್ 2016 ರವರೆಗೆ ಅಕಾಡೆಮಿಯು ಹೊಂದಿರುವ ಸಾಹಸ ಕೇಂದ್ರಗಳಲ್ಲಿ ಹಾಗೂ ರಾಜ್ಯದ ವಿವಿಧ ಸ್ಥಳಗಳಲ್ಲಿ ಲಭ್ಯವಿರುವ ಸೌಲಭ್ಯಗಳನುಸಾರ ಆಯೋಜಿಸಲಾಗುವುದು. 16 ರಿಂದ 35 ವರ್ಷ ವಯೋಮಿತಿಯ ಯುವಜನರಿಗೆ ರಿವರ್ ರ್‍ಯಾಪ್ಟಿಂಗ್, ವೈಟ್‌ವಾಟರ್ ರ್‍ಯಾಪ್ಟಿಂಗ್, ಟ್ರಕ್ಕಿಂಗ್, ಪ್ರಕೃತಿ ಅಧ್ಯಯನ ಶಿಬಿರ, ಬೇಸಿಕ್, ಓರಿಯಂಟೇಷನ್ ಹಾಗೂ ಅಡ್ವಾನ್ಸ್ ತರಬೇತಿ ಶಿಬಿರಗಳನ್ನು ಜಲಸಾಹಸ ಹಾಗೂ ಭೂ ಸಾಹಸ ಕ್ರೀಡೆಗಳಲ್ಲಿ ಆಯೋಜಿಸಲಾಗುವುದು.

ಆಸಕ್ತ ಯುವಕ:ಯುವತಿಯರು ನಿಗಧಿತ ಅರ್ಜಿಗಳನ್ನು ಭರ್ತಿಮಾಡಿ ಅರ್ಜಿಯೊಂದಿಗೆ ಪ್ರವೇಶ ಶುಲ್ಕ ರೂ 100/- ಗಳನ್ನು 'ಚೇತನಾ, ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ, ಬೆಂಗಳೂರು – 560 001' ಇಲ್ಲಿಗೆ ದಿನಾಂಕ: 25-06-2016 ರೊಳಗೆ ಪಾವತಿಮಾಡಿ ಸಲ್ಲಿಸತಕ್ಕದ್ದು. ಭಾಗವಹಿಸುವ ಅಭ್ಯರ್ಥಿಗಳು ಅಕಾಡೆಮಿಯು ವಿಧಿಸಿರುವ ನಿಬಂಧನೆಗಳು/ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ತರಬೇತಿ ಶಿಬಿರಗಳ ದಿನಾಂಕ ಹಾಗೂ ಸ್ಥಳವನ್ನು ಅರ್ಜಿಗಳನ್ನು ಸ್ವೀಕರಿಸಿದ ನಂತರದಲ್ಲಿ ತಿಳಿಸಲಾಗುವುದು.

ಹೆಚ್ಚಿನ ವಿವರಗಳಿಗಾಗಿ ಕಚೇರಿ ದೂರವಾಣಿ ಸಂಖ್ಯೆ : 080–22210454/7760124150 ವೆಬ್‌ಸೈಟ್ www.youthportal.gov.in ಇಲ್ಲಿ ಅರ್ಜಿಗಳನ್ನು ಪಡೆಯಬೇಕು.

ಬಾಬು::ಜಿಪಿಆರ್

# ಪ್ರೋತ್ಸಾಹ ಧನಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು, ಜೂನ್ 16 (ಕರ್ನಾಟಕ ವಾರ್ತೆ)

ಕನ್ನಡ ಪುಸ್ತಕ ಪ್ರಾಧಿಕಾರದ ವತಿಯಿಂದ 2015ನೇ ಸಾಲಿನ ಯುವ ಬರಹಗಾರರ ಚೊಚ್ಚಲ ಕೃತಿಗಳನ್ನು ಪ್ರಕಟಿಸಲು ಪ್ರೋತ್ಸಾಹಧನ ನೀಡುವ ಸಲುವಾಗಿ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಜಿದಾರರು ಕನಿಷ್ಠ 18 ರಿಂದ 35 ವರ್ಷ ವಯೋಮಿತಿಯವರಾಗಿರಬೇಕು. ಸ್ವ–ವಿವರವುಳ್ಳ ಮನವಿಯೊಂದಿಗೆ ದೃಢೀಕೃತ ಎಸ್.ಎಸ್.ಎಲ್.ಸಿ. ಪ್ರಮಾಣ ಪತ್ರದ ಪ್ರತಿ ಅಥವಾ ಅಧಿಕೃತವಾದ, ದೃಢೀಕರಿಸಲ್ಪಟ್ಟ ಜನ್ಮ ದಾಖಲಾತಿ ಪ್ರಮಾಣ ಪತ್ರದ ಪ್ರತಿಯನ್ನು ಸಲ್ಲಿಸಬೇಕು. ಅಲ್ಲದೆ ಪ್ರಸ್ತುತ ಸಲ್ಲಿಸಲ್ಪಡುತ್ತಿರುವ ಕೃತಿಯು ತಮ್ಮ ಚೊಚ್ಚಲ ಕೃತಿಯಾಗಿದ್ದು, ಎಲ್ಲಿಯೂ ಪ್ರಕಟವಾಗಿಲ್ಲವೆಂದು ಸ್ವಯಂ ದೃಢೀಕರಣ ಪತ್ರ ನೀಡಬೇಕು.

ಆಯ್ಕೆಗಾಗಿ ಸಲ್ಲಿಸುವ ಹಸ್ತಪ್ರತಿಯು ಡಿ.ಟಿ.ಪಿ. ಮಾಡಿಸಿದಾಗ 1/8 ಡೆಮ್ಮಿ ಅಳತೆಯಲ್ಲಿ ಕನಿಷ್ಠ 60 ಪುಟಗಳಿರಬೇಕು. ಅನುವಾದ, ಪಠ್ಯಪುಸ್ತಕ ಹಾಗೂ ಬೇರಾವುದೇ ಪದವಿಗೆ ಸಿದ್ಧಪಡಿಸಿದ ಪ್ರಬಂಧಗಳನ್ನು ಹೊರತುಪಡಿಸಿ, ಕಥೆ, ಕಾದಂಬರಿ, ಕವನ, ನಾಟಕ, ವಿಮರ್ಶಾ ಲೇಖನ, ಪ್ರಬಂಧ ಮುಂತಾದ ಕನ್ನಡ ಸಾಹಿತ್ಯದ ಪ್ರಕಾರಗಳಿಗೆ ಸಂಬಂಧಿಸಿದಂತೆ ಹಸ್ತಪ್ರತಿ ಇರಬೇಕು. ಕೃತಿಯ ಪಠ್ಯದಲ್ಲಿ ಯಾವುದೇ ಧರ್ಮ, ದೇವರು, ಜಾತಿ, ಕೋಮು, ವೃತ್ತಿ, ಸಮುದಾಯ, ಭಾಷೆ, ಆಚರಣೆ, ಪದ್ಧತಿ, ಇತ್ಯಾದಿ ಸಂಗತಿಗಳಿಗೆ ಸಂಬಂಧಿಸಿದಂತೆ ಹಾಗೂ ರಾಷ್ಟ್ರೀಯ ನಾಯಕರುಗಳ ಕುರಿತಂತೆ ನೇರವಾಗಿಯೇ ಆಗಲಿ ಅಥವಾ ಪರೋಕ್ಷವಾಗಿಯೇ ಆಗಲಿ ಮನನೋಯಿಸುವಂತಹ ವಿಷಯವಾಗಲಿ ಇರಬಾರದು. ಅಲ್ಲದೆ ರಾಷ್ಟ್ರೀಯ ಭಾವೈಕ್ಯತೆಗೆ ಧಕ್ಕೆ ತರುವಂತಹ ವಿಷಯ/ಸಂಗತಿಗಳು ಪ್ರಸ್ತಾಪವಾಗಿರಬಾರದು. ಪ್ರಾಧಿಕಾರಕ್ಕೆ ಸಲ್ಲಿಸಲ್ಪಡುವ ಅರ್ಜಿಗಳನ್ನು/ಹಸ್ತಪ್ರತಿಗಳನ್ನು ಹಿಂದಿರುಗಿಸಲಾಗುವುದಿಲ್ಲ. ಆದಕಾರಣ ಹಸ್ತಪ್ರತಿಯ/ಡಿ.ಟಿ.ಪಿ. ಪ್ರತಿಯ ಎರಡನೇ ಪ್ರತಿಯನ್ನು ಸಲ್ಲಿಸಲು ತಿಳಿಸಿದೆ.

ಅರ್ಜಿಗಳನ್ನು ದಿನಾಂಕ: 30–06–2016 ರೊಳಗೆ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 560 002 – ಅವರಿಗೆ ಕಳುಹಿಸಿಕೊಡಲು ಕೋರಿದೆ.

ಹೆಚ್ಚಿನ ಮಾಹಿತಿಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – ದೂರವಾಣಿ ಸಂಖ್ಯೆ 080 – 22484516/22017704 – ಇಲ್ಲಿ ಸಂಪರ್ಕಿಸಬಹುದಾಗಿದೆ.

ಬಾಬು::ಜಿಪಿಆರ್

# ಕಬ್ಬನ್ ಪಾರ್ಕ್‌ನಲ್ಲಿ ಜೂನ್ 19 ರಂದು ಪೂರ್ವಭಾವಿ ಯೋಗ ಕಾರ್ಯಕ್ರಮ

ಬೆಂಗಳೂರು, ಜೂನ್ 16 (ಕರ್ನಾಟಕ ವಾರ್ತೆ)

ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಪೂರ್ವಭಾವಿಯಾಗಿ ಜೂನ್ 19 ರಂದು ಆಯುಷ್ ಇಲಾಖೆಯು ಈಶಾ ಫೌಂಡೇಶನ್ ಕೊಯಬಂತ್ತೂರು ಇವರ ಸಹಭಾಗಿತ್ವದಲ್ಲಿ "ಉಪ–ಯೋಗ' ಎಂಬ ಕಾರ್ಯಕ್ರಮವನ್ನು ಏರ್ಪಡಿಸಿದೆ.

ಅಂದು ಕಬ್ಬನ್ ಪಾರ್ಕ್ (ಸಿಟಿ ಸೆಂಟ್ರಲ್ ಲೈಬ್ರರಿಯಿಂದ ಹಡ್ಸನ್ ವೃತ್ತದವರೆಗೆ) ನಲ್ಲಿ ಬೆಳಿಗ್ಗೆ 7–30 ರಿಂದ 8–30 ಗಂಟೆಯವರೆಗೆ ನಡೆಯಲಿರುವ ಈ "ಉಪ–ಯೋಗ' ಕಾರ್ಯಕ್ರಮವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ಯು.ಟಿ. ಖಾದರ್ ಉದ್ಘಾಟಿಸಲಿದ್ದು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ, ಡಾ. ಶಾಲಿನಿ ರಜನೀಶ್, ಆಯುಕ್ತರಾದ ಪಿ. ಎಸ್. ವಸ್ತ್ರದ್ ಭಾಗವಹಿಸಲಿದ್ದಾರೆ.

"ಉಪ–ಯೋಗ" ಕಾರ್ಯಕ್ರಮದಲ್ಲಿ ಸಾರ್ವಜನಿಕರಿಗೆ ಕಲರಿ ಪ್ರದರ್ಶನ, ಸುಲಭ ವ್ಯಾಯಾಮಗಳು, ಪ್ರಾಣಾಯಾಮದ ಕುರಿತು ಡಿ.ವಿ.ಡಿ. ಮುಖಾಂತರ ತರಬೇತಿಯನ್ನು ನೀಡುವ ಜೊತೆಗೆ ಸುಮಾರು 2500 ಮಂದಿ ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಯೋಗ ದಿನಾಚರಣೆಯ ಕುರಿತು ಜನಜಾಗೃತಿ ಮೂಡಿಸುವರು.

ಹಾಗೆಯೇ ಜೂನ್ 21 ರಂದು ಆಚರಿಸಲಾಗುತ್ತಿರುವ 2ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಕಂಠೀರವ ಕ್ರೀಡಾಂಗಣದಲ್ಲಿ ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಒಲಂಪಿಕ್ ಅಸೋಸಿಯೇಷನ್ ಜೊತೆಯಾಗಿ ಅರ್ಥಪೂರ್ಣವಾಗಿ ಆಚರಿಸಲು ಆಯುಷ್ ಇಲಾಖೆಯು ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ.

ಕಾರ್ಯಕ್ರಮದಲ್ಲಿ ಸುಮಾರು 15 ಸಾವಿರಕ್ಕೂ ಹೆಚ್ಚು ಮಂದಿ ಯೋಗಾಸನ ಪ್ರದರ್ಶನ ನಡೆಸಲಿದ್ದು ಎಸ್–ವ್ಯಾಸ ಸಂಸ್ಥೆ ಮತ್ತು ಆರ್ಟ್ ಆಫ್ ಲೀವಿಂಗ್ ಅವರ ವತಿಯಿಂದ ಜನಸಾಮಾನ್ಯರಿಗೆ ಮಧುಮೇಹದ ತಪಾಸಣೆ, ಶಿಕ್ಷಕರಿಗೆ ನೆನಪಿನ ಶಕ್ತಿ, ಸೃಜನಶೀಲತೆ, ಶಾಲಾ ಮಕ್ಕಳಿಗೆ ಭಾವನಾತ್ಮಕ ಸಂಸ್ಕೃತಿ ಬಗ್ಗೆ ತಿಳುವಳಿಕೆ ಹಾಗೂ ಸಿ.ಡಿ.ಪಿ.ಒ. ಗಳಿಗೆ ಹ್ಯಾಪಿನೆಸ್ ಪ್ರೋಗ್ರಾಮ್‌ಗಳನ್ನು ನಡೆಸಲಾಗುತ್ತದೆ.

ಪೂರ್ಣಿಮಾ::ಜಿಪಿಆರ್

## ಬೆಳೆಹಾನಿ, ಬೆಳೆವಿಮೆ : 3100 ಕೋಟಿ ರೂ. ರೈತರಿಗೆ ಪರಿಹಾರ ವಿತರಣೆ

– ಸಚಿವ ಕೃಷ್ಣಭೈರೇಗೌಡ

ಬೆಂಗಳೂರು, ಜೂನ್ 16 (ಕರ್ನಾಟಕ ವಾರ್ತೆ)

ಮುಂಗಾರು ಹಾಗೂ ಮುಂಗಾರು ಪೂರ್ವದಲ್ಲಿ ಬೆಳೆಹಾನಿ ಹಾಗೂ ಬೆಳೆ ವಿಮೆ ಸೇರಿದಂತೆ ಈ ವರ್ಷ ಒಟ್ಟು 3100 ಕೋಟಿ ರೂ ಮೊತ್ತವನ್ನು ರೈತರಿಗೆ ಬೆಳೆ ಪರಿಹಾರ ರೂಪದಲ್ಲಿ ನೀಡಲಾಗಿದೆ ಎಂದು ಕೃಷಿ ಖಾತೆ ರಾಜ್ಯ ಸಚಿವ ಕೃಷ್ಣಬೈರೇಗೌಡ ಅವರು ತಿಳಿಸಿದರು.

ವಿಕಾಸಸೌಧದ ತಮ್ಮ ಕಚೇರಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು ಇತ್ತೀಚಿನ ವರ್ಷಗಳಲ್ಲಿ ರೈತರಿಗೆ ಇಷ್ಟು ದೊಡ್ಡ ಪ್ರಮಾಣದಲ್ಲಿ ಬೆಳೆ ಪರಿಹಾರವನ್ನು ರಾಜ್ಯ ಸರ್ಕಾರ ನೀಡಿದೆ ಎಂದರು.

ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಗೆ ಈ ವರ್ಷದ ಆಯವ್ಯಯದಲ್ಲಿ 675 ಕೋಟಿ ರೂ. ಗಳನ್ನು ಕಾಯ್ದಿರಿಸಲಾಗಿದ್ದು ಸದ್ಯದಲ್ಲಿಯೇ ಮುಖ್ಯಮಂತ್ರಿ ಅವರು ಈ ಯೋಜನೆಗೆ ಚಾಲನೆ ನೀಡಲಿದ್ದಾರೆ. ಈ ವರ್ಷ ಶೇ 20 ರಷ್ಟು ರೈತರನ್ನು ವಿಮಾ ಯೋಜನೆಗೆ ಸೇರಿಸುವಂತ ಗುರಿಯನ್ನು ಸರ್ಕಾರ ಹೊಂದಿದ್ದು ಈ ಬಗ್ಗೆ ರೈತರಲ್ಲಿ ಜಾಗೃತಿ ಮೂಡಿಸುವಂತ ಕೆಲಸ ಮಾಡಲಾಗುವುದು ಎಂದರು.

ಈ ಬಾರಿ ರಾಜ್ಯದಲ್ಲಿ ಉತ್ತಮ ಮಳೆ ಬರುವ ಸಾಧ್ಯತೆ ಇದ್ದು ರೈತರಿಗೆ ಬೇಕಾಗಿರುವ 21 ಲಕ್ಷ ಮೆಟ್ರಿಕ್ ಟನ್ ರಸಗೊಬ್ಬರ ಪ್ರಮಾಣದಲ್ಲಿ ಈಗಾಗಲೇ ಮಾರುಕಟ್ಟೆ ಮತ್ತು ಕಾಯ್ದಿಟ್ಟ ದಾಸ್ತಾನಿನಲ್ಲಿ 10.5 ಲಕ್ಷ

ಮೆಟ್ರಿಕ್ ಟ್ರನ್ ಗೊಬ್ಬರವನ್ನು ದಾಸ್ತಾನು ಮಾಡಲಾಗಿದೆ ಎಂದ ಸಚಿವರು ನಮ್ಮ ಸರ್ಕಾರ ಬಂದ ಮೇಲೆ ಸಾವಯವ ಕೃಷಿಗೂ ಹೆಚ್ಚು ಒತ್ತು ನೀಡಿದೆ ಎಂದು ಮಾತನಾಡಿದರು.

ಮುಂಗಾರು ಬೆಳೆಗೆ ಅಗತ್ಯವಾಗಿ ಬೇಕಾಗಿರುವ ಬಿತ್ತನೆ ಬೀಜಗಳು ಹಾಗೂ ರಸಗೊಬ್ಬರಕ್ಕೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ತಿಳಿಸಿದರು.

ಬಾಬು:ಕೆಪಿಪಿ:ಜಿಪಿಆರ್.

# ರಾಜ್ಯಗಳಿಗೆ ಕಲ್ಲಿದ್ದಲು ಬಳಕೆ ಅಧಿಕಾರ: ಇಂಧನ ಸಚಿವರ ಸ್ವಾಗತ

ಬೆಂಗಳೂರು, ಜೂನ್ 16 (ಕರ್ನಾಟಕ ವಾರ್ತೆ)

ಇಂಧನ ತಯಾರಿಕೆಗಾಗಿ ರಾಜ್ಯಕ್ಕೆ ನೀಡಲಾಗುತ್ತಿರುವ ಕಲ್ಲಿದ್ದಲನ್ನು ನಿಗದಿಯಾದ ವಿದ್ಯುತ್ ಸ್ಥಾವರಕ್ಕಷ್ಟೆ ಬಳಸದೇ, ಇತರ ಯಾವುದೇ ವಿದ್ಯುತ್ ಸ್ಥಾವರಗಳಲ್ಲಿ ಬಳಸಿಕೊಳ್ಳುವ ಹೊಂದಾಣಿಕೆಗೆ [**flexibility**] ಅವಕಾಶ ಮಾಡಿಕೊಡುವ ಮಹತ್ವದ ನಿರ್ಧಾರವನ್ನು ಕೇಂದ್ರ ಸರ್ಕಾರ ಕೈಗೊಂಡಿರುತ್ತದೆ.

ಕರ್ನಾಟಕವೂ ಸೇರಿದಂತೆ ಹಲವಾರು ರಾಜ್ಯಗಳು ಈ ದಿಕ್ಕಿನಲ್ಲಿ ಮಾಡಿದ್ದ ಮನವಿಯನ್ನು ಪುರಸ್ಕರಿಸಿದ ಕೇಂದ್ರ ಸರ್ಕಾರ ಜೂನ್ 4, 2016 ರಂದು ನಡೆದ ಸಚಿವ ಸಂಪುಟದ ಸಭೆಯಲ್ಲಿ ಈ ನಿರ್ಧಾರ ಕೈಗೊಂಡಿರುತ್ತದೆ.

ಈ ಹಿಂದೆ ಯಾವ ಯಾವ ವಿದ್ಯುತ್ ಸ್ಥಾವರಕ್ಕೆ ಕಲ್ಲಿದ್ದಲು ನಿಕ್ಷೇಪದಿಂದ ಕಲ್ಲಿದ್ದಲು ಮಂಜೂರಾಗಿದೆಯೇ, ಅದೇ ವಿದ್ಯುತ್ ಸ್ಥಾವರಕ್ಕೆ ಉಪಯೋಗಕ್ಕೆ ಮಾತ್ರ ಬಳಸಬಹುದಾಗಿತ್ತು. ಇದರಿಂದ ಕಲ್ಲಿದ್ದಲು ಸಾಗಣೆಯ ವೆಚ್ಚ ಹೆಚ್ಚಾಗಿ ಹಲವೊಮ್ಮೆ ವಿದ್ಯುತ್ ಉತ್ಪಾದನೆಯ ವೆಚ್ಚ ಅನಗತ್ಯವಾಗಿ ಹೆಚ್ಚಾಗುತ್ತಿತ್ತು.

ಇದನ್ನು ತಪ್ಪಿಸಲು ನಿರ್ದಿಷ್ಟ ವಿದ್ಯುತ್ ನಿರ್ಮಾಣ ಸ್ಥಾವರಗಳಿಗೆ ಮೀಸಲಿಡಿಸಿದ್ದ ಕಲ್ಲಿದ್ದಲ ಬಳಕೆಯ ಅಧಿಕಾರವನ್ನು ಆಯಾ ರಾಜ್ಯಗಳಿಗೆ ವಹಿಸುವ ಮೂಲಕ ಕಲ್ಲಿದ್ದಲು ಸಾಗಣೆ ಮತ್ತು ಬಳಸುವಿಕೆಯಲ್ಲಿ ಹೊಂದಾಣಿಕೆಯ ಹೆಚ್ಚಿನ ಅಧಿಕಾರ ನೀಡಲಾಗಿದೆ.

ಕೇಂದ್ರ ಸರ್ಕಾರ ಈ ನಿರ್ಧಾರವನ್ನು ಕರ್ನಾಟಕ ಇಂಧನ ಸಚಿವರಾದ ಡಿ. ಕೆ. ಶಿವಕುಮಾರ್ ಸ್ವಾಗತಿಸಿದ್ದು, ಕರ್ನಾಟಕದ ಬೇಡಿಕೆಯನ್ನು ಮನ್ನಿಸಿದ ಕೇಂದ್ರ ಇಂಧನ ಸಚಿವ ಪಿಯೂಶ್ ಗೋಯಲ್ ಅವರಿಗೆ ಕೃತಜ್ಞತೆಗಳನ್ನು ಸಲ್ಲಿಸಿದ್ದಾರೆ.

ಬಾಬು/ಕೆಎಂ